**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ**: ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ "**ಆತ್ಮ ನಿರ್ಭರ್ ನಿಧಿ**" ಯೋಜನೆಯನ್ನು ವಿಸ್ತರಿಸುವ ಕುರಿತು.

**ಓದಲಾಗಿದೆ**: 1. ಸರ್ಕಾರದ ಆದೇಶ ಸಂ.ಕೌಉಜೀಇ 144 ಉಜೀಇ 2020 ದಿನಾಂಕ:15.06.2020.
2. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ ಅಭಿಯಾನ, ಬೆಂಗಳೂರು ಇವರ ಪತ್ರ ದಿ: 04-04-2022

*****

**ಪ್ರಸ್ತಾವನೆ**:

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ರಾಜ್ಯದ 277 ನಗರ ಸ್ಥಳೀಯ ಸಂಸ್ಥೆಗಳಲ್ಲಿ 'ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ' (PM SVANidhi) ಯೋಜನೆಯನ್ನು ಅನುಷ್ಠಾನಗೊಳಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ವಿಶೇಷ ಕಿರು ಸಾಲ ಸೌಲಭ್ಯ (PM SVANidhi) ಯೋಜನೆಯ ಅವಧಿಯು 31.03.2022 ಕ್ಕೆ ಮುಕ್ತಾಯಗೊಂಡಿರುತ್ತದೆ. ಆದರೆ, ಸದರಿ ಯೋಜನೆಯನ್ನು ಮುಂದಿನ ಆರು (06) ತಿಂಗಳುಗಳ ಕಾಲ ಅಥವಾ ಸಕ್ಷಮ ಪ್ರಾಧಿಕಾರದಿಂದ ಅಂತಿಮ ಅನುಮತಿಯನ್ನು ಪಡೆದುಕೊಳ್ಳುವವರೆಗೆ ಪ್ರಸ್ತುತವಿರುವ PMSVANidhi ಯೋಜನೆಯ ಮಾರ್ಗಸೂಚಿಯ ಅಂಶಗಳಂತೆ ವಿಸ್ತರಿಸಿರುವುದಾಗಿ ಕಾರ್ಯದರ್ಶಿಗಳು, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ, ನವದೆಹಲಿ ಇವರ ಪತ್ರ ದಿ: 01-04-2022 ರಲ್ಲಿ ತಿಳಿಸಿರುತ್ತಾರೆ.

ಅದರಂತೆ, ಕರ್ನಾಟಕ ರಾಜ್ಯವು ಸದರಿ ಯೋಜನೆಯ ಅನುಷ್ಠಾನದಲ್ಲಿ 6ನೇ ಸ್ಥಾನವನ್ನು ಹೊಂದಿದ್ದು, ಈಗಾಗಲೇ ಬಿಬಿಎಂಪಿ ಹಾಗೂ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅರ್ಹ 2,39,349 ಫಲಾನುಭವಿಗಳು ಅರ್ಜಿ ಸಲ್ಲಿಸಿರುತ್ತಾರೆ. ಈ ಪೈಕಿ 1,75,568 ಫಲಾನುಭವಿಗಳಿಗೆ ಸಾಲ ಮಂಜೂರಾತಿಯನ್ನು ನೀಡಲಾಗಿದ್ದು, ಒಟ್ಟು 1,50,150 ಫಲಾನುಭವಿಗಳಿಗೆ ರೂ.160.18 ಕೋಟಿಗಳಷ್ಟು ಸಾಲ ವಿತರಣೆಯಾಗಿರುತ್ತದೆ.

ಆದ್ದರಿಂದ, ಸದರಿ ಯೋಜನೆಯನ್ನು ಮುಂದಿನ ಆರು (06) ತಿಂಗಳುಗಳ ಕಾಲ ಅಥವಾ ಸಕ್ಷಮ ಪ್ರಾಧಿಕಾರದಿಂದ ಅಂತಿಮ ಅನುಮತಿಯನ್ನು ಪಡೆದುಕೊಳ್ಳುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಪ್ರಸ್ತುತವಿರುವ PMSVANidhi ಯೋಜನೆಯ ಮಾರ್ಗಸೂಚಿಯ ಅಂಶಗಳಂತೆ ವಿಸ್ತರಿಸಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಅಧಿಸೂಚನೆ ಹೊರಡಿಸುವಂತೆ ಕೋರಿರುತ್ತಾರೆ.

..2/-

ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 60 ಉಜೀಇ 2022 ಬೆಂಗಳೂರು, ದಿನಾಂಕ: 20.04.2022**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ' ಯೋಜನೆಯನ್ನು (PMSVANidhi) ದಿನಾಂಕ: 01-04-2022 ರಿಂದ ಅನ್ವಯಿಸುವಂತೆ 06 ತಿಂಗಳ ಅವಧಿಯವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

ಇವರಿಗೆ:

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ.
5. ಎಲ್ಲಾ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಅಪರ ಮುಖ್ಯ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಆಯುಕ್ತರು, ಬಿ.ಬಿ.ಎಂ.ಪಿ., ಬೆಂಗಳೂರು.
7. ಜಂಟಿ ಕಾರ್ಯದರ್ಶಿಗಳು, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ.
8. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
9. ಅಭಿಯಾನ ನಿರ್ದೇಶಕರು, ಡೇ-ನಲ್ಮ್, ಬೆಂಗಳೂರು.
10. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಟವರ್, ಬೆಂಗಳೂರು.
11. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
12. ಎಲ್ಲಾ ಜಿಲ್ಲಾಧಿಕಾರಿಗಳು,
13. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
14. ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳು
15. ಆರ್.ಬಿ.ಐ.ನ ರಾಜ್ಯ ಪ್ರತಿನಿಧಿ.
16. ರಾಜ್ಯ ಸಂಚಾಲಯಕರು, ಎಸ್.ಎಲ್.ಬಿ.ಸಿ..
17. ಜಿಲ್ಲಾ ಲೀಡ್ ಬ್ಯಾಂಕ್ ಮುಖ್ಯಸ್ಥರು

...3/-

18. ಸಿಡ್‌ಬಿ ಯ ರಾಜ್ಯ ಪ್ರತಿನಿಧಿ
19. ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯ ಸಂಚಾಲಕರು
20. ಪೌರಾಯುಕ್ತರು (ಇ.ಓ.)
21. ಎನ್.ಬಿ.ಎಫ್.ಸಿ/ಎಂ.ಎಫ್.ಐ.
22. ಪ್ರದೇಶ ಮತ್ತು ನಗರ ಮಟ್ಟದ ಒಕ್ಕೂಟದ ಪ್ರತಿನಿಧಿಗಳು
23. ಸಮುದಾಯ ಸಂಘಟನಾಧಿಕಾರಿ/ ಸಮುದಾಯ ಸಂಘಟಕರು.
24. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
25. ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
26. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಉಜೀ ಇಲಾಖೆ
27. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
28. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಉಜೀ ಇಲಾಖೆ
29. ಶಾಖಾ ರಕ್ಷ ಕಡತ /ಹೆಚ್ಚುವರಿ ಪ್ರತಿ.